ಕರ್ನಾಟಕ ಸರ್ಕಾರ

ತಾಂತ್ರಿಕ ಶಿಕ್ಷಣ ಇಲಾಖೆ

DTE-ADMI0ACM2/60/2023

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ:03-11-2023.

**- :: ಸು ತ್ತೋ ಲೆ ::-**

ವಿಷಯ: **2023-24ನೇ ಸಾಲಿನಲ್ಲಿ ಸರ್ಕಾರಿ, ಅನುದಾನಿತ ಮತ್ತು ಖಾಸಗಿ ಪಾಲಿಟೆಕ್ನಿಕ್ ವಿದ್ಯಾರ್ಥಿಗಳ 3 & 5ನೇ ಸೆಮಿಸ್ಟರ್ ಡಿಪ್ಲೋಮಾ ತರಗತಿಗಳಿಗೆ ಪ್ರವೇಶಾವಧಿ ವಿಸ್ತರಿಸುವ ಬಗ್ಗೆ.**

ಉಲ್ಲೇಖ: 1. ಈ ಕಛೇರಿ ಸಮ ಸಂಖ್ಯೆ ಸುತ್ತೋಲೆ ದಿನಾಂಕ: 02-08-2022 & 10-10-2023.
2. ಹಲವು ವಿದ್ಯಾರ್ಥಿಗಳ ಮನವಿ ಪತ್ರಗಳು.

*********

2023-24ನೇ ಸಾಲಿನಲ್ಲಿ 3 & 5ನೇ ಸೆಮಿಸ್ಟರ್ ಡಿಪ್ಲೋಮಾ ತರಗತಿಗಳ ಪ್ರವೇಶಕ್ಕೆ ಸಂಬಂಧಿಸಿದಂತೆ ಅಂತಿಮ ದಿನಾಂಕ:05-12-2022 ಎಂದು ಉಲ್ಲೇಖ(1)ರ ದಿ:16-10-2023ರ ಸುತ್ತೋಲೆಯಲ್ಲಿ ನಿಗದಿಪಡಿಸಲಾಗಿತ್ತು. ಮುಂದುವರೆದಂತೆ, ಅನೇಕ ವಿದ್ಯಾರ್ಥಿಗಳು ಮೇಲ್ಕಂಡಂತೆ ಅಂತಿಮ ದಿನಾಂಕದೊಳಗೆ ತಮ್ಮ ವೈಯಕ್ತಿಕ ಕಾರಣಗಳಿಂದಾಗಿ ಪ್ರವೇಶ ಶುಲ್ಕ ಪಾವತಿಸದೇ ಇದ್ದು, ಪ್ರವೇಶ ಅನುಮತಿ ಕೋರಿ ಮನವಿ ಸಲ್ಲಿಸಿರುತ್ತಾರೆ. ಪರಿಶೀಲಿಸಲಾಗಿ, ವಿದ್ಯಾರ್ಥಿಗಳ ಮತ್ತು ಸಾರ್ವಜನಿಕರ ಹಿತದೃಷ್ಟಿಯಿಂದ ಪರಿಗಣಿಸಿ 2023-24ನೇ ಸಾಲಿನ 3 & 5ನೇ ಸೆಮಿಸ್ಟರ್ ಡಿಪ್ಲೋಮಾ ಪ್ರವೇಶ ಸಂಬಂಧ ಅಂತಿಮ ದಿನಾಂಕವನ್ನು ಈ ಕೆಳಕಂಡಂತೆ ವಿಸ್ತರಿಸಲಾಗಿದೆ.

**3 & 5ನೇ ಸೆಮಿಸ್ಟರ್ ತರಗತಿಗೆ ಪ್ರವೇಶ ಹಾಗೂ ಮರುಪ್ರವೇಶ ಪಡೆಯಲು ದಿನಾಂಕ:08-11-2023 ರ ಒಳಗೆ ರೂ. 1000/- ದಂಡ ಶುಲ್ಕದೊಂದಿಗೆ ಪ್ರವೇಶ ನೀಡುವುದು.**

ಮೇಲ್ಕಂಡ ಅವಧಿ ವಿಸ್ತರಣೆ ಹೊರತುಪಡಿಸಿ ಉಲ್ಲೇಖ(1) ರಲ್ಲಿನ ಸುತ್ತೋಲೆಗಳಲ್ಲಿ ಯಾವುದೇ ಬದಲಾವಣೆಗಳು ಇರುವುದಿಲ್ಲ. ತಾಂತ್ರಿಕ ಪರೀಕ್ಷಾ ಮಂಡಳಿ ನಿಯಮಗಳನ್ವಯ ಹಾಜರಾತಿಯನ್ನು ಪೂರೈಸುವ ಷರತ್ತಿಗೊಳಪಟ್ಟು ಮೇಲ್ಕಂಡ ಅವಧಿಯಲ್ಲಿ ಸದರಿ ವಿದ್ಯಾರ್ಥಿಗಳಿಗೆ ಮಾತ್ರ ಅನ್ವಯವಾಗುವಂತೆ ಪ್ರವೇಶ ನೀಡತಕ್ಕದ್ದು.

ಆಯುಕ್ತರು
**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ**
**ಬೆಂಗಳೂರು**

ಇವರಿಗೆ,

*ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಖಾಸಗಿ ಪಾಲಿಟೆಕ್ನಿಕ್‌ನ ಪ್ರಿನ್ಸಿಪಾಲರುಗಳಿಗೆ - ಮಾಹಿತಿಗಾಗಿ ಮತ್ತು ಸೂಕ್ತ ಅನುಸರಣೆಗಾಗಿ.*

**ಪ್ರತಿ ಇವರಿಗೆ ಮಾಹಿತಿಗಾಗಿ:-**

1. ಆಯುಕ್ತರವರ ಆಪ್ತಶಾಖೆಗೆ.
2. ನಿರ್ದೇಶಕರವರ ಆಪ್ತಶಾಖೆಗೆ.
3. ಕಾರ್ಯದರ್ಶಿಗಳು, ತಾಂತ್ರಿಕ ಪರೀಕ್ಷಾ ಮಂಡಳಿ, ಬೆಂಗಳೂರು
5. ಸಾರ್ವಜನಿಕ ಸಂಪರ್ಕಾಧಿಕಾರಿಯವರಿಗೆ.
6. ಇ-ಗವರ್ನೆನ್ಸ್ ವಿಭಾಗಕ್ಕೆ - ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
7. ಕಛೇರಿ ಪ್ರತಿ.